All India Radio: Bangalore
National Bulletin In Kannada
17.03.2026  19.35 hrs

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

***************

ಮುಖ್ಯಾಂಶಗಳು

- ವಿರೋಧ ಪಕ್ಷದ ೮ ಸದಸ್ಯರ ಅಮಾನತು ರದ್ದು; ನಿರ್ಣಯ ಅಂಗೀಕರಿಸಿದ ಲೋಕಸಭೆ
- ಕೇಂದ್ರ ಬಜೆಟ್‌ನಲ್ಲಿ ಕೃಷಿ ವಲಯಕ್ಕೆ ಅನುದಾನ ಹೆಚ್ಚಳ - ಕೇಂದ್ರ ಸಚಿವ ಭಾಗೀರಥ್ ಚೌಧರಿ
- ಪಶ್ಚಿಮ ಏಷ್ಯದಲ್ಲಿನ ಬಿಕ್ಕಟ್ಟಿನ ಹೊರತಾಗಿಯೂ ಭಾರತದ ಆರ್ಥಿಕ ಪರಿಸ್ಥಿತಿ ಸದೃಢವಾಗಿದೆ - ಸಚಿವ ಪಿಯೂಶ್ ಗೋಯಲ್
- ಗಲ್ಫ್ ಪ್ರದೇಶದಲ್ಲಿ ಎಲ್ಲ ಭಾರತೀಯ ನಾವಿಕರು, ಹಡಗುಗಳು ಸುರಕ್ಷಿತವಾಗಿವೆ - ಕೇಂದ್ರ ಸರ್ಕಾರ

***************

ವಿರೋಧ ಪಕ್ಷದ ೮ ಸದಸ್ಯರ ಅಮಾನತನ್ನು ಲೋಕಸಭೆ ಇಂದು ರದ್ದುಗೊಳಿಸಿದೆ. ಈ ಸಂಬಂಧ ಮಂಡಿಸಲಾದ ಈ ನಿರ್ಣಯವನ್ನು ಸದನವು ಸರ್ವಾನುಮತದಿಂದ ಅಂಗೀಕರಿಸಿದ ನಂತರ ಈ ಕ್ರಮ ಕೈಗೊಳ್ಳಲಾಗಿದೆ.

ಈ ಸಂಸದರ ಅಮಾನತನ್ನು ತಕ್ಷಣದಿಂದಲೇ ಜಾರಿಗೆ ತರುವಂತೆ ರದ್ದುಗೊಳಿಸುವ ಪ್ರಸ್ತಾವನೆಯನ್ನು ಕೇಂದ್ರ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಮಂಡಿಸಿದರು. ಅಮಾನತು ರದ್ದಾದ ಸಂಸದರಲ್ಲಿ ಕಾಂಗ್ರೆಸ್‌ನ ಮಾಣಿಕ್ಕಮ್ ಠಾಗೂರ್, ಅಮರಿಂದರ್ ಸಿಂಗ್ ರಾಜ, ಗುರುಜಿತ್ ಸಿಂಗ್, ಹಿಬಿ ಈಡನ್, ಡೀನ್ ಕುರಿಯಾಕೋಸ್, ಪ್ರಶಾಂತ್ ಪಡೋಲೆ ಮತ್ತು ಕಿರಣ್ ಕುಮಾರ್ ರೆಡ್ಡಿ ಹಾಗೂ ಸಿಪಿಎಂ ನ ಎಸ್.ವೆಂಕಟೇಶನ್ ಸೇರಿದ್ದಾರೆ.

ಈ ವೇಳೆ ಲೋಕಸಭಾಧ್ಯಕ್ಷ ಓಂ ಬಿರ್ಲಾ ಮಾತನಾಡಿ, ನಿನ್ನೆ ನಡೆದ ಲೋಕಸಭೆಯ ವಿವಿಧ ಪಕ್ಷಗಳ ಮುಖಂಡರ ಸಭೆಯಲ್ಲಿ ಎಲ್ಲಾ ಪಕ್ಷಗಳು ಸಂಸತ್ತಿನ ಸಂಪ್ರದಾಯಗಳನ್ನು ಪಾಲಿಸುವುದರ ಜೊತೆಗೆ ಸದನದ ಘನತೆ ಮತ್ತು ಶಿಸ್ತನ್ನು ಎತ್ತಿ ಹಿಡಿಯುವ ತಮ್ಮ ಬದ್ಧತೆಯನ್ನು ಪುನರುಚ್ಚರಿಸಿವೆ ಎಂದು ತಿಳಿಸಿದರು.

ಸಂಸತ್ತಿನ ಸಂಕೀರ್ಣದಲ್ಲಿ ಭಿತ್ತಿ ಚಿತ್ರಗಳು, ಬ್ಯಾನರ್‌ಗಳು, ಕೃತಕಬುದ್ಧಿ ಸೃಜಿತ ವಿಡಿಯೊಗಳು ಮತ್ತು ಚಿತ್ರಗಳನ್ನು ಪ್ರದರ್ಶಿಸದಂತೆ ಹಾಗೂ ಸದನದ ಘನತೆಯನ್ನು ಕಾಪಾಡುವಂತೆ ಅವರು ಸದಸ್ಯರಲ್ಲಿ ಮನವಿ ಮಾಡಿದರು.

***************

ಕೇಂದ್ರ ಸರ್ಕಾರ, ಕೃಷಿ ಮತ್ತು ರೈತರ ಕಲ್ಯಾಣ ಇಲಾಖೆಯ ಬಜೆಟ್ ಹಂಚಿಕೆಯನ್ನು ೨೦೧೩-೧೪ರಲ್ಲಿ ೨೧ ಸಾವಿರದ ೯೩೩ ಕೋಟಿ ರೂಪಾಯಿಗಳಿಂದ ೨೦೨೫-೨೬ರಲ್ಲಿ ೧ ಲಕ್ಷದ ೨೭ ಸಾವಿರದ ೨೯೦ ಕೋಟಿ ರೂಪಾಯಿಗಳಿಗೆ ಹೆಚ್ಚಿಸಿದೆ ಎಂದು ಕೇಂದ್ರ ಕೃಷಿ ಮತ್ತು ರೈತರ ಕಲ್ಯಾಣ ಖಾತೆ ರಾಜ್ಯ ಸಚಿವ ಭಾಗೀರಥ್ ಚೌಧರಿ ತಿಳಿಸಿದ್ದಾರೆ.

ಲೋಕಸಭೆಯಲ್ಲಿ ಇಂದು ಪ್ರಶ್ನೆಯೊಂದಕ್ಕೆ ಲಿಖಿತ ಉತ್ತರ ನೀಡಿದ ಅವರು, ಉತ್ಪಾದನೆ, ಲಾಭದಾಯಕ ಆದಾಯ ಮತ್ತು ಬೆಂಬಲವನ್ನು ಹೆಚ್ಚಿಸುವ ಮೂಲಕ ರೈತರ ಕಲ್ಯಾಣಕ್ಕಾಗಿ ಸರ್ಕಾರ ವಿವಿಧ ಯೋಜನೆಗಳನ್ನು ಪ್ರಾರಂಭಿಸಿದೆ ಎಂದರು.

ಇದುವರೆಗೆ ೯ ಲಕ್ಷ ಹೆಕ್ಟೇರ್‌ಗಳನ್ನು ಒಳಗೊಂಡ ೧೮ ಸಾವಿರ ೮೨೫ ಕ್ಲಸ್ಟರ್‌ಗಳನ್ನು ರಚಿಸಲಾಗಿದೆ ಮತ್ತು ೧೯ ಲಕ್ಷ ರೈತರ ನೋಂದಣಿಯನ್ನು ಮಾಡಲಾಗಿದೆ. ಉತ್ಪಾದನಾ ವೆಚ್ಚವನ್ನು ಲೆಕ್ಕಿಸದೆ ಯೂರಿಯಾವನ್ನು ಶಾಸನಬದ್ಧವಾಗಿ ಸೂಚಿಸಲಾದ ಗರಿಷ್ಠ ಚಿಲ್ಲರೆ ಬೆಲೆಯಲ್ಲಿ ರೈತರಿಗೆ ಒದಗಿಸಲಾಗಿದೆ ಎಂದು ಅವರು ತಿಳಿಸಿದರು.

ಯುವಕರಿಗೆ ಕೃಷಿಯನ್ನು ಒಂದು ಕಾರ್ಯಸಾಧ್ಯವಾದ ವೃತ್ತಿ ಆಯ್ಕೆಯಾಗಿ ಉತ್ತೇಜಿಸಲು, ಸರ್ಕಾರ ವಿವಿಧ ಉಪಕ್ರಮಗಳನ್ನು ತೆಗೆದುಕೊಂಡಿದೆ. ಭಾರತೀಯ ಕೃಷಿ ಸಂಶೋಧನಾ ಮಂಡಳಿ, ದೇಶದ ಗ್ರಾಮೀಣ ಜಿಲ್ಲೆಗಳಲ್ಲಿ ೭೩೧ ಕೃಷಿ ವಿಜ್ಞಾನ ಕೇಂದ್ರಗಳನ್ನು ಸ್ಥಾಪಿಸಿದೆ ಎಂದು ಸಚಿವ ಭಾಗೀರಥ್ ಚೌಧರಿ ಮಾಹಿತಿ ನೀಡಿದರು.

***************

ಪಶ್ಚಿಮ ಏಷ್ಯಾದಲ್ಲಿನ ಬಿಕ್ಕಟ್ಟಿನ ಹೊರತಾಗಿಯೂ ಭಾರತದ ಆರ್ಥಿಕ ಪರಿಸ್ಥಿತಿ ಸದೃಢವಾಗಿದೆ ಎಂದು ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ತಿಳಿಸಿದ್ದಾರೆ.

ಲೋಕಸಭೆಯಲ್ಲಿ ಇಂದು ಪ್ರಶ್ನೋತ್ತರ ಅವಧಿಯಲ್ಲಿ ಪೂರಕ ಪ್ರಶ್ನೆಯೊಂದಕ್ಕೆ ಉತ್ತರಿಸಿದ ಅವರು, ಭಾರತದೊಂದಿಗೆ ವ್ಯಾಪಾರ ಸಂಬಂಧಗಳನ್ನು ಬಲಪಡಿಸಿಕೊಳ್ಳಲು ವಿಶ್ವದಾದ್ಯಂತ ಉತ್ಸಾಹ ಹೆಚ್ಚುತ್ತಿದೆ. ಕಳೆದ ಮೂರು ವರ್ಷಗಳಲ್ಲಿ ೩೮ ದೇಶಗಳೊಂದಿಗೆ ವ್ಯಾಪಾರ ಒಪ್ಪಂದಗಳಿಗೆ ಸಹಿ ಹಾಕಲಾಗಿದ್ದು, ಇದು ರಫ್ತುದಾರರಿಗೆ ಹೆಚ್ಚಿನ ಅವಕಾಶಗಳನ್ನು ಒದಗಿಸಿದೆ ಎಂದು ಅವರು ಹೇಳಿದರು.

ಈ ಎಲ್ಲಾ ಮುಕ್ತ ವ್ಯಾಪಾರ ಒಪ್ಪಂದಗಳು ಕಾರ್ಯರೂಪಕ್ಕೆ ಬಂದಾಗ, ಅವು ಭಾರತೀಯ ರಫ್ತುದಾರರಿಗೆ ಅಪಾರ ಅವಕಾಶಗಳನ್ನು ಸೃಷ್ಟಿಸುತ್ತವೆ. ಕಳೆದ ಫೆಬ್ರವರಿ ತಿಂಗಳವರೆಗೆ ಭಾರತದ ಸರಕು ರಫ್ತು ಸ್ಥಿರವಾಗಿತ್ತೇ ಹೊರತು ಕುಸಿತ ಕಂಡಿಲ್ಲ ಎಂದು ಸಚಿವ ಪಿಯೂಷ್ ಗೋಯಲ್ ಸ್ಪಷ್ಟಪಡಿಸಿದರು.

***************

ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯನ್ನು ವಿಕಸಿತ ಭಾರತ ಗ್ಯಾರಂಟಿ ಫಾರ್ ರೋಜ್‌ಗಾರ್ ಅಂಡ್ ಅಜೀವಿಕ ಮಿಷನ್- ವಿಕಸಿತ ಭಾರತ ಜಿ ರಾಮ್ ಜಿ ಎಂದು ಮರುನಾಮಕರಣ ಮಾಡಿದ್ದನ್ನು ಕೇಂದ್ರ ಗ್ರಾಮೀಣಾಭಿವೃದ್ಧಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಸಮರ್ಥಿಸಿಕೊಂಡಿದ್ದಾರೆ.

ರಾಜ್ಯಸಭೆಯಲ್ಲಿಂದು ಗ್ರಾಮೀಣಾಭಿವೃದ್ಧಿ ಸಚಿವಾಲಯದ ಕಾರ್ಯವೈಖರಿ ಕುರಿತು ಉತ್ತರಿಸಿದ ಸಚಿವರು, ಯುಪಿಎ ಆಡಳಿತಕ್ಕೆ ಹೋಲಿಸಿದರೆ, ಎನ್‌ಡಿಎ ಆಡಳಿತದಲ್ಲಿ ಈ ಯೋಜನೆ ಅತ್ಯುತ್ತಮವಾಗಿ ಜಾರಿಯಾಗುತ್ತಿದೆ ಎಂದು ಹೇಳಿದರು.

೨೦೦೬-೦೭ ರಿಂದ ೨೦೧೪ರ ವರೆಗೆ ಯುಪಿಎ ಸರ್ಕಾರ, ಈ ಯೋಜನೆಗಾಗಿ ೨ ಲಕ್ಷದ ೧೨ ಸಾವಿರದ ೪೦೯ ಕೋಟಿ ರೂಪಾಯಿಗಳನ್ನು ಖರ್ಚು ಮಾಡಿದೆ. ಆದರೆ, ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಎನ್‌ಡಿಎ ಸರ್ಕಾರ ಇದಕ್ಕಾಗಿ ೮ ಲಕ್ಷದ ೫೮ ಸಾವಿರದ ೩೪೬ ಕೋಟಿ ರೂಪಾಯಿಗಳನ್ನು ನೀಡಿದೆ ಎಂದು ತಿಳಿಸಿದ ಅವರು, ಗ್ರಾಮೀಣ ಉದ್ಯೋಗ ಕಾಯ್ದೆಯ ಮರುನಾಮಕರಣದ ವಿಷಯದಲ್ಲಿ ವಿರೋಧ ಪಕ್ಷಗಳು ರಾಜಕೀಯ ಮಾಡುತ್ತಿವೆ ಎಂದು ಸಚಿವ ಶಿವರಾಜ್ ಸಿಂಗ್ ಚೌಹಾಣ್ ದೂರಿದರು.

***************

ಗಲ್ಫ್ ಪ್ರದೇಶದಲ್ಲಿ ಎಲ್ಲಾ ಭಾರತೀಯ ನಾವಿಕರು ಮತ್ತು ಹಡಗುಗಳು ಸುರಕ್ಷಿತವಾಗಿವೆ ಎಂದು ಬಂದರು, ಹಡಗು ಸಾಗಣೆ ಮತ್ತು ಜಲಮಾರ್ಗಗಳ ಸಚಿವಾಲಯದ ವಿಶೇಷ ಕಾರ್ಯದರ್ಶಿ ರಾಜೇಶ್ ಕುಮಾರ್ ಸಿನ್ಹಾ ತಿಳಿಸಿದ್ದಾರೆ.

ನವದೆಹಲಿಯಲ್ಲಿಂದು ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, ಕಳೆದ ೨೪ ಗಂಟೆಗಳಲ್ಲಿ ಗಲ್ಫ್ ಪ್ರದೇಶದಿಂದ ೧೬೧ ಭಾರತೀಯ ನಾವಿಕರು ಮರಳಿದ್ದಾರೆ. ಎರಡನೇ ಎಲ್‌ಪಿಜಿ ವಾಹಕ ನಂದಾ ದೇವಿ, ಇಂದು ಬೆಳಗಿನ ಜಾವ ೨:೩೦ ರ ಸುಮಾರಿಗೆ ಗುಜರಾತ್‌ನ ಕಾಂಡ್ಲಾ ಬಂದರು ತಲುಪಿದ್ದು, ಈಗ ಎಲ್‌ಪಿಜಿ ವಾಹಕ ನಂದಾ ದೇವಿ ಮತ್ತು ಶಿವಾಲಿಕ್ ನಿಂದ ಸರಕುಗಳನ್ನು ಬಿಡುಗಡೆ ಮಾಡಲಾಗುತ್ತಿದೆ ಎಂದು ಮಾಹಿತಿ ನೀಡಿದರು.

ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವಾಲಯದ ಜಂಟಿ ಕಾರ್ಯದರ್ಶಿ ಸುಜಾತಾ ಶರ್ಮಾ ಮಾತನಾಡಿ, ದೇಶಾದ್ಯಂತ ಪೆಟ್ರೋಲ್ ಮತ್ತು ಡೀಸೆಲ್ ಸಾಕಷ್ಟು ಪ್ರಮಾಣದಲ್ಲಿ ಲಭ್ಯವಿದೆ. ವಾಣಿಜ್ಯ ಎಲ್‌ಪಿಜಿ ಗ್ರಾಹಕರು ಪಿಎನ್‌ಜಿ ಗೆ ವರ್ಗವಾಗುವ ನಿಟ್ಟಿನಲ್ಲಿ ಪ್ರೋತ್ಸಾಹಿಸಲು ಸರ್ಕಾರ ಪ್ರಯತ್ನಗಳನ್ನು ಮಾಡುತ್ತಿದೆ ಎಂದು ಹೇಳಿದರು.

ಅನಿಲ ಕೊಳವೆ ಮಾರ್ಗಕ್ಕೆ ಬಾಕಿ ಇರುವ ಅನುಮತಿಗಳಿಗೆ ಅನುಮೋದನೆ ನೀಡುವಂತೆ ಮತ್ತು ಹೊಸ ಅರ್ಜಿಗಳನ್ನು ೨೪ ಗಂಟೆಗಳ ಒಳಗೆ ಅನುಮೋದಿಸುವಂತೆ ವಿನಂತಿಸಿ ಕೇಂದ್ರ ಸರ್ಕಾರ, ಎಲ್ಲಾ ರಾಜ್ಯ ಸರ್ಕಾರಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಿಗೆ ಪತ್ರ ಬರೆದಿದೆ ಎಂದು ಅವರು ತಿಳಿಸಿದರು.

***************

ಇರಾನ್‌ನಲ್ಲಿ ಕಳೆದ ರಾತ್ರಿ ಇಸ್ರೇಲ್ ನಡೆಸಿದ ವೈಮಾನಿಕ ದಾಳಿಯಲ್ಲಿ ಇರಾನ್‌ನ ಭದ್ರತಾ ಮುಖ್ಯಸ್ಥ ಅಲಿ ಲಾರಿಜಾನಿ ಸಾವನ್ನಪ್ಪಿದ್ದಾರೆ ಎಂದು ಇಸ್ರೇಲ್ ರಕ್ಷಣಾ ಸಚಿವ ಇಸ್ರೇಲ್ ಕಾಟ್ಜ್ ತಿಳಿಸಿದ್ದಾರೆ.

ಆದರೆ ಈ ಬಗ್ಗೆ ಇರಾನ್ ಯಾವುದೇ ಪ್ರಕ್ರಿಯೆ ನೀಡಿಲ್ಲ. ಇರಾನ್‌ನ ಸರ್ವೋಚ್ಚ ನಾಯಕ ದಿವಂಗತ ಅಯತೊಲ್ಲಾ ಅಲಿ ಖಮೇನಿ ಅವರ ಪ್ರತಿನಿಧಿಯಾಗಿ ಎಸ್.ಎನ್.ಎಸ್.ಸಿ ಕಾರ್ಯದರ್ಶಿಯಾಗಿ ೨೦೨೫ರ ಆಗಸ್ಟ್‌ನಲ್ಲಿ ಅವರನ್ನು ನೇಮಿಸಲಾಗಿತ್ತು. ಈ ಹಿಂದೆ ೨೦೦೮ ರಿಂದ ೨೦೨೦ರ ವರೆಗೆ ೧೨ ವರ್ಷಗಳ ಕಾಲ ಇರಾನ್ ಸಂಸತ್ತಿನ ಸ್ಪೀಕರ್ ಆಗಿಯೂ ಅವರು ಸೇವೆ ಸಲ್ಲಿಸಿದ್ದರು.

***************

ಇರಾಕ್ ಮತ್ತು ದೋಹಾವನ್ನು ಗುರಿಯಾಗಿಸಿಕೊಂಡು ನಡೆದ ಸಂಘಟಿತ ವೈಮಾನಿಕ ದಾಳಿಗಳಿಂದಾಗಿ ಪಶ್ಚಿಮ ಏಷ್ಯಾದಲ್ಲಿ ಇಂದು ಉದ್ವಿಗ್ನತೆ ತೀವ್ರಗೊಂಡಿದೆ.

ಬಾಗ್ದಾದ್‌ನ ಹಸಿರು ವಲಯದಲ್ಲಿ ಅಮೆರಿಕ ರಾಯಭಾರ ಕಚೇರಿಯ ಮೇಲೆ ಡ್ರೋನ್ ಮತ್ತು ರಾಕೆಟ್‌ಗಳಿಂದ ದಾಳಿ ನಡೆಸಲಾಗಿದ್ದು, ನಗರದಲ್ಲಿ ನಡೆದ ದಾಳಿಗಳಲ್ಲಿ ನಾಲ್ವರು ಸಾವನ್ನಪ್ಪಿದ್ದಾರೆ. ಮೃತರಲ್ಲಿ ಇರಾನ್‌ನ ಸಲಹೆಗಾರರೂ ಸೇರಿದ್ದಾರೆ.

ಕತೈಬ್ ಹೆಜ್ಬೊಲ್ಲಾದ ಅಬು ಅಲಿ ಅಲ್-ಅಸ್ಕರಿ ಹತ್ಯೆಯ ಬೆನ್ನಲ್ಲೇ ಈ ದಾಳಿಗಳು ನಡೆದಿವೆ. ಇರಾಕ್ ಪ್ರಧಾನಿ ಮೊಹಮ್ಮದ್ ಶಿಯಾ ಅಲ್-ಸುಡಾನಿ, ಈ ದಾಳಿಗಳನ್ನು ತೀವ್ರವಾಗಿ ಖಂಡಿಸಿದ್ದಾರೆ.

ಇದೇ ವೇಳೆ, ೧೪ ಬ್ಯಾಲಿಸ್ಟಿಕ್ ಕ್ಷಿಪಣಿಗಳು ಮತ್ತು ಹಲವಾರು ಡ್ರೋನ್‌ಗಳಿಂದ ಇರಾನ್ ದಾಳಿ ನಡೆಸಿದ ನಂತರ ಕತಾರ್ ತನ್ನ ರಾಜಧಾನಿ ದೋಹಾದಲ್ಲಿ ವಾಯು ರಕ್ಷಣಾ ವ್ಯವಸ್ಥೆಯನ್ನು ಸಕ್ರಿಯಗೊಳಿಸಿದೆ.

***************

ಕಾಬೂಲ್‌ನಲ್ಲಿ ಪಾಕಿಸ್ತಾನ ನಡೆಸಿದ ವೈಮಾನಿಕ ದಾಳಿಗೆ ತೀವ್ರವಾಗಿ ಪ್ರತ್ಯುತ್ತರ ನೀಡುವುದಾಗಿ ಅಫ್ಘಾನಿಸ್ತಾನ ಎಚ್ಚರಿಸಿದೆ.

ಅಫ್ಘಾನಿಸ್ತಾನದ ಆಂತರಿಕ ಸಚಿವಾಲಯದ ವಕ್ತಾರ ಅಬ್ದುಲ್ ಮತಿನ್ ಮಾತನಾಡಿ, ಪಾಕಿಸ್ತಾನದ ಇತ್ತೀಚಿನ ದಾಳಿಯನ್ನು ಅಫ್ಘಾನಿಸ್ತಾನವು ಗಂಭೀರವಾಗಿ ಪರಿಗಣಿಸಿದೆ. ಇಂತಹ ದಾಳಿಗಳಿಗೆ ಸೂಕ್ತ ಪ್ರತ್ಯುತ್ತರ ನೀಡದೆ ಸುಮ್ಮನಿರುವುದಿಲ್ಲ, ಈ ದಾಳಿಗಳು ದೇಶದ ಸಾರ್ವಭೌಮತ್ವದ ಸ್ಪಷ್ಟ ಉಲ್ಲಂಘನೆ ಎಂದು ಹೇಳಿದ್ದಾರೆ.

*******ಮುಕ್ತಾಯ*******